**ದಿನಾಂಕ: 07.08.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಜೆ.ಪಿ.ನಗರ ವ್ಯಾಪ್ತಿಯಲ್ಲಿ ಮೋಟಾರು ವಾಹನಗಳ ಕಳ್ಳತನವಾಗುತ್ತಿರುವುದಾಗಿ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಚರ್ಚಿಸಲಾಯಿತು.
- ಇಂದಿರಾ ಪ್ರಿಯದರ್ಶಿನಿ ಸ್ಕೂಲ್ ಹಿಂಭಾಗದಲ್ಲಿರುವ ಕಸದ ರಾಶಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ತೆರವುಗೊಳಿಸುವಂತೆ ಚರ್ಚಿಸಲಾಯಿತು.
- 17ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆಯಲ್ಲಿರುವ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಜೆ.ಪಿ.ನಗರ ಸುತ್ತಮುತ್ತಲಿನ ಪ್ರದೇಶವನ್ನು ಪ್ರತಿನಿತ್ಯ ಸ್ವಚ್ಛತಾ ಕಾರ್ಯಕ್ರಮದಡಿಯಲ್ಲಿ ಕೈಗೊಳ್ಳುವಂತೆ ಚರ್ಚಿಸಲಾಯಿತು.

**ಪು.ತಿ.ನೋ**

- ಜೆ.ಪಿ.ನಗರ 4ನೇ ಹಂತದ ಡಾಲರ್ಸ್ ಕಾಲೋನಿಯಲ್ಲಿ ಬೀದಿ ದೀಪಗಳ ರಿಪೇರಿಯನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಬೀದಿ ದೀಪಗಳ ಮೇಲೆ ಮರದ ರೆಂಬೆ – ಕೊಂಬೆಗಳು ಬಾಗಿಕೊಂಡಂತಿದ್ದು, ಸದರಿ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸುವಂತೆ ಅರಣ್ಯ ಇಲಾಖೆಯವರಿಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಜೆ.ಪಿ.ನಗರ 4ನೇ ಹಂತದ ಡಾಲರ್ಸ್ ಕಾಲೋನಿಯಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಎಸ್‌ಡಬ್ಲ್ಯೂಎಂ ಹತ್ತಿರ ಇರುವ ಕಸದ ರಾಶಿಯನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಹಿರಿಯ / ಕಿರಿಯ ಆರೋಗ್ಯಾಧಿಕಾರಿಗಳಿಗೆ ಸೂಚಿಸಲು ಕೋರಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (signature) | (signature) |
| **ಸದಸ್ಯ ಕಾರ್ಯದರ್ಶಿ** | **ಅಧ್ಯಕ್ಷರು** |
| **ಹಾಗೂ ಕಿರಿಯ ಅಭಿಯಂತರರು** | **ವಾರ್ಡ್ ಸಮಿತಿ, ವಾರ್ಡ್ ನಂ. 177** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |